ಕರ್ನಾಟಕ ಸರ್ಕಾರ

(ಪೊಲೀಸ್ ಇಲಾಖೆ)

**ಪೊಲೀಸ್ ಆಯುಕ್ತರು ಮತ್ತು ಅಪರ ಜಿಲ್ಲಾ ದಂಡಾಧಿಕಾರಿಗಳು ಬೆಂಗಳೂರು ನಗರರವರ ನಡವಳಿಗಳು**

ಉಪಸ್ಥಿತರು : ಭಾಸ್ಕರ್ ರಾವ್, ಭಾ.ಪೊ.ಸೇ. ಪೊಲೀಸ್ ಆಯುಕ್ತರು, ಬೆಂಗಳೂರು ನಗರ.

ವಿಷಯ : ದಿನಾಂಕ: 10.11.2019 ರಂದು ಆಚರಿಸುವ ಈದ್‌ಮಿಲಾದ್ ಹಬ್ಬದ ಸಂಬಂಧ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಮದ್ಯಮಾರಾಟ ನಿಷೇಧಿಸುವ ಬಗ್ಗೆ

*****

ಪ್ರಸ್ತಾವನೆ:

ದಿನಾಂಕ: 10.11.2019 ರಂದು ಬೆಂಗಳೂರು ನಗರಾದ್ಯಂತ ಮುಸ್ಲೀಮರು ಈದ್‌ಮಿಲಾದ್ ಹಬ್ಬವನ್ನು ಆಚರಿಸುವ ಪ್ರಯುಕ್ತ, ಮಸೀದಿಗಳಲ್ಲಿ ಪ್ರಾರ್ಥನೆ ಮುಗಿಸಿ ನಂತರ, ಮೆರವಣಿಗೆಯಲ್ಲಿ ಸ್ಥಬ್ಧ ಚಿತ್ರಗಳು, ಧ್ವನಿವರ್ಧಕಗಳನ್ನು ಉಪಯೋಗಿಸಿಕೊಂಡು, ಆಯುಧಗಳನ್ನು ಹಾಗೂ ಇನ್ನಿತರೆ ವಸ್ತುಗಳನ್ನು ಪ್ರದರ್ಶಿಸಿ ಕುಣಿಯುತ್ತಾ ರಸ್ತೆಗಳಲ್ಲಿ ವಾಹನಗಳಲ್ಲಿ, ನಡಿಗೆಯಲ್ಲಿ, ವೈ.ಎಂ.ಸಿ.ಎ. ಮೈದಾನ ಹಾಗೂ ನಗರದ ಇತರೆ ಮೈದಾನಗಳಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಈ ಮೆರವಣಿಗೆಯಲ್ಲಿ ಹೆಚ್ಚಿನ ಜನರು ಭಾಗವಹಿಸಲಿದ್ದು, ಮೆರವಣಿಗೆ ನಡೆಯುವ ಸಮಯದಲ್ಲಿ ಕಿಡಿಗೇಡಿಗಳು ಮದ್ಯದ ಅಮಲಿನಲ್ಲಿ ಕಿಡಿಗೇಡಿ ಕೃತ್ಯಗಳನ್ನೆಸಗಿ ಸಾರ್ವಜನಿಕ ಶಾಂತಿ ಸುವ್ಯವಸ್ಥೆಗೆ ಭಂಗವನ್ನುಂಟುಮಾಡುವ ಸಂಭವವಿರುವುದಾಗಿ ಮಾಹಿತಿಯಿಂದ ತಿಳಿದುಬಂದಿರುತ್ತದೆ.

ಮೇಲ್ಕಂಡ ಮಾಹಿತಿಯ ಬಗ್ಗೆ ನಾನು ಸ್ವತಃ ಪರಿಶೀಲಿಸಲಾಗಿ ಹಾಗೂ ಗುಪ್ತವಾರ್ತಾ ವಿಭಾಗದ ಮಾಹಿತಿಯಿಂದ ಸಾಕಷ್ಟು ಸತ್ಯಾಂಶವಿದೆ ಎಂದು ತಿಳಿದುಬಂದಿರುತ್ತದೆ. ಈದ್‌ಮಿಲಾದ್ ಮೆರವಣಿಗೆಯ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯುವ ಉದ್ದೇಶದಿಂದ ಹಾಗೂ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗವುಂಟಾಗದಂತೆ ಅಹಿತಕರ ಘಟನೆಗಳನ್ನು ತಡೆಯುವ ಅವಶ್ಯಕತೆ ಇರುವುದರಿಂದ ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಮದ್ಯಪಾನ ಮಾರಾಟವನ್ನು ನಿಷೇದಿಸುವುದು ಸೂಕ್ತವೆಂದು ಮನಗಂಡಿರುತ್ತೇನೆ. ಆದ್ದರಿಂದ ಈ ಆದೇಶ-

**ಆದೇಶ ಸಂಖ್ಯೆ ಗು.ವಾ/ಎಸ್.ಬಿ./ಮದ್ಯ ಮಾರಾಟ ನಿಷೇದಾಜ್ಞೆ/45/2019 ದಿನಾಂಕ : 05.11.2019**

ಈ ದೆಸೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಭಾರತೀಯದಂಡ ಪ್ರಕ್ರಿಯ ಸಂಹಿತೆಯ ಕಲಂ. 144 ರ ಉಪ ಕಲಂ (1) ಮತ್ತು (3)ರ ಅನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾಸ್ಕರ್ ರಾವ್, ಭಾ.ಪೊ.ಸೇ. ಪೊಲೀಸ್ ಆಯುಕ್ತರು, ಬೆಂಗಳೂರು ನಗರ ಆದ ನಾನು **ದಿನಾಂಕ: 10.11.2019 ರಂದು ಬೆಳಿಗ್ಗೆ 6-00 ಗಂಟೆಯಿಂದ ಮಧ್ಯರಾತ್ರಿ 12.00 ಗಂಟೆಯವರೆಗೆ,** ಬೆಂಗಳೂರು ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ರೀತಿಯ ಬಾರ್‌ಗಳು, ವೈನ್ಸ್‌ಷಾಪ್‌ಗಳು, ಪಬ್‌ಗಳು ಹಾಗೂ ಎಲ್ಲಾ ರೀತಿಯ ಮದ್ಯ ಮಾರಾಟ ಮಾಡುವ ಅಂಗಡಿಗಳನ್ನು ಮುಚ್ಚಲು ಹಾಗೂ ಮದ್ಯ ಮಾರಾಟವನ್ನು ಮಾಡದಿರಲು ನಿಷೇದಾಜ್ಞೆಯನ್ನು ವಿಧಿಸಿರುತ್ತೇನೆ.

ಮೇಲ್ಕಂಡ ಆಜ್ಞೆಯನ್ನು ನನ್ನ ಸಹಿ ಮತ್ತು ನನ್ನ ಕಛೇರಿಯ ಮೊಹರಿನಲ್ಲಿ 2019 ರ ನವೆಂಬರ್ ಮಾಹೆಯ ದಿನಾಂಕ 05 ರಂದು ಹೊರಡಿಸಿರುತ್ತೇನೆ.

Seal of the Commissioner of Police & District Magistrate, Bengaluru City

(ಭಾಸ್ಕರ್ ರಾವ್)
ಪೊಲೀಸ್ ಆಯುಕ್ತರು, ಭಾ.ಪೊ.ಸೇ.
ಅಪರ ಜಿಲ್ಲಾ ದಂಡಾಧಿಕಾರಿಗಳು
ಬೆಂಗಳೂರು ನಗರ.

ಭಾಸ್ಕರ್ ರಾವ್, ಭಾ.ಪೊ.ಸೇ.
ಪೊಲೀಸ್ ಆಯುಕ್ತರು
ಬೆಂಗಳೂರು ನಗರ.